DIGITAL ADVERTISEMENT
Rs. 499/- PER MONTH
We promote your BUSINESS
Call/Whatsapp: 7789951009
TARGETED REACH | BUSINESS GROWTH | MORE CUSTOMERS | BETTER RESULT!

QKePaper.com
Free Online Daily Newspaper
ಅ A ह అ क ఆ म ও ঘ अ অ

ಸಂಪುಟ: 02 ಸಂಚಿಕೆ: 28 23.07.2026 ಗುರುವಾರ FREE EPAPER

ಹವಾಮಾನ ವರದಿ

ಬೀದರ್, ಕರ್ನಾಟಕ
23 ಜುಲೈ, 2026, ಗುರುವಾರ

ಗರಿಷ್ಠ ತಾಪಮಾನ 28°C
ಮಧ್ಯಮ ಮಳೆಯ ಸಾಧ್ಯತೆ
ಆರ್ದ್ರತೆ: 82%
ಗಾಳಿ ವೇಗ: 15-23 km/h
ಸೂರ್ಯೋದಯ: 06:12 AM
ಮಳೆಯ ಸಾಧ್ಯತೆ: 70%
ಕನಿಷ್ಠ ತಾಪಮಾನ 22°C

ಶುಕ್ರವಾರ	ಶನಿವಾರ	ಭಾನುವಾರ	ಸೋಮವಾರ
24°C	27°C	25°C	23°C

ಮೋಡ ಕವಿದ ವಾತಾವರಣ. ಮಧ್ಯಮ ಮಳೆಯ ಸಾಧ್ಯತೆ ಇದೆ. ಹೊರಗೆ ಪ್ರಯಾಣಿಸುವಾಗ ಎಚ್ಚರಿಕೆ ವಹಿಸಿ.

ಸಂಸತ್‌ನಲ್ಲಿ ಪ್ರತಿಪಕ್ಷಗಳಿಗೆ ಮಾತನಾಡಲು ಅವಕಾಶ ಕೊಡುತ್ತಿಲ್ಲ ; ಪ್ರಜಾಪ್ರಭುತ್ವ ಕೊನೆಗೊಂಡಿದೆ : ಪ್ರಿಯಾಂಕಾ ಗಾಂಧಿ ಆರೋಪ

ಹೊಸದಿಲ್ಲಿ 22 ಜುಲೈ : ಯುವಜನತೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ನಿರ್ಣಾಯಕ ವಿಷಯಗಳ ಕುರಿತು ಸಂಸತ್ತಿನಲ್ಲಿ ಚರ್ಚಿಸಲು ವಿರೋಧ ಪಕ್ಷದ ನಾಯಕರಿಗೆ ಪದೇ ಪದೇ ತಡೆಯೊಡ್ಡುವ ಮೂಲಕ ಸರಕಾರವು ಅಪ್ರಜಾಸತ್ತಾತ್ಮಕವಾಗಿ ನಡೆದುಕೊಳ್ಳುತ್ತಿದೆ ಎಂದು ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ಬುಧವಾರ ಆರೋಪಿಸಿದ್ದಾರೆ.

ಪ್ರತಿಭಟನಾ ನಿರತ ವಿದ್ಯಾರ್ಥಿಗಳಿಗೆ ಬೆಂಬಲ ಸೂಚಿಸಲು ಕಪ್ಪು ಉಡುಪು ಧರಿಸಿದ್ದ ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ, ಸರಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. "ದೇಶದಲ್ಲಿ ಪ್ರಜಾಪ್ರಭುತ್ವ ಅಂತ್ಯಗೊಂಡಿದೆ" ಎಂದು ಅವರು ಹೇಳಿದರು.

ಯುವಜನತೆ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದ ನಿರ್ಣಾಯಕ ವಿಷಯಗಳ ಕುರಿತು ಸಂಸತ್ತಿನಲ್ಲಿ ಚರ್ಚಿಸಲು ವಿರೋಧ ಪಕ್ಷದ ನಾಯಕರಿಗೆ ಪದೇ ಪದೇ ತಡೆಯೊಡ್ಡುತ್ತಿರುವ ಆಡಳಿತವು ಅಪ್ರಜಾಸತ್ತಾತ್ಮಕವಾಗಿದೆ ಎಂದು ಅವರು ಆರೋಪಿಸಿದರು.

ಪ್ರಧಾನಿ ನರೇಂದ್ರ ಮೋದಿ ಅವರ 7, ಲೋಕ ಕಲ್ಯಾಣ್ ಮಾರ್ಗ ನಿವಾಸದ ಹೊರಗೆ ಮಂಗಳವಾರ ಕಾಂಗ್ರೆಸ್ ನಡೆಸಿದ ಪ್ರತಿಭಟನೆಯನ್ನು ಪ್ರಸ್ತಾಪಿಸಿದ ಪ್ರಿಯಾಂಕಾ ಗಾಂಧಿ, ವಾಕ್ ಸ್ವಾತಂತ್ರ್ಯ ಮತ್ತು ಶಾಂತಿಯುತ ಪ್ರತಿಭಟನೆಯ ಹಕ್ಕು ಪ್ರಜಾಪ್ರಭುತ್ವದಲ್ಲಿ ಅತ್ಯಂತ ದೊಡ್ಡ ಸಂಗತಿಗಳಾಗಿವೆ ಎಂದು ಹೇಳಿದರು.

"ಅದರಲ್ಲಿ ಯಾವುದೇ ಅಪ್ರಜಾಸತ್ತಾತ್ಮಕ ಅಂಶವಿಲ್ಲ. ಆದರೆ ಸಂಸತ್‌ನಲ್ಲಿ ಮತ್ತು ರಸ್ತೆಗಳಲ್ಲಿ ನಡೆಯುತ್ತಿರುವುದೇ ಅಪ್ರಜಾಸತ್ತಾತ್ಮಕ" ಎಂದು ಅವರು ಹೇಳಿದರು.

ಪ್ರತಿಭಟನಾ ನಿರತ ವಿದ್ಯಾರ್ಥಿಗಳ ಮೇಲೆ ಪೋಲೀಸರು ನಡೆಸಿದ ದೌರ್ಜನ್ಯವನ್ನು ಖಂಡಿಸಿ, ವಿರೋಧ ಪಕ್ಷದ ನಾಯಕಿ ರಾಹುಲ್ ಗಾಂಧಿ ಮತ್ತು ಇತರ ಹಲವು ವಿರೋಧ ಪಕ್ಷದ ಸಂಸದರು ಬುಧವಾರ ಸಂಸತ್‌ನ ಹೊರಗೆ ಕಪ್ಪು ಉಡುಪು ಧರಿಸಿ ಪ್ರತಿಭಟನೆ ನಡೆಸಿದರು.

ಶಿಕ್ಷಣ ವ್ಯವಸ್ಥೆಯಲ್ಲಿ ಅಕ್ರಮ; ೧೦ ವರ್ಷಗಳಲ್ಲಿ ೧೫೨ ಪ್ರಶ್ನೆಪತ್ರಿಕೆ ಸೋರಿಕೆ, ಒಂದೇ ಒಂದರಲ್ಲೂ ಶಿಕ್ಷೆಯಾಗಿಲ್ಲ: ರಾಹುಲ್ ಗಾಂಧಿ ಆರೋಪ

ಹೊಸದಿಲ್ಲಿ 22 ಜುಲೈ : ದೇಶದ ಶಿಕ್ಷಣ ವ್ಯವಸ್ಥೆಯಲ್ಲಿ ಗಂಭೀರ ಅಕ್ರಮಗಳು ನಡೆದಿದ್ದು, ಅದರ ಪರಿಣಾಮವನ್ನು ಲಕ್ಷಾಂತರ ವಿದ್ಯಾರ್ಥಿಗಳು ಮತ್ತು ಅವರ ಕುಟುಂಬಗಳು ಅನುಭವಿಸುತ್ತಿವೆ ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದರು. ಕಳೆದ 10 ವರ್ಷಗಳಲ್ಲಿ 152 ಪರೀಕ್ಷೆಗಳ ಪ್ರಶ್ನೆಪತ್ರಿಕೆಗಳು ಸೋರಿಕೆಯಾಗಿದ್ದರೂ, ಒಂದೇ ಒಂದು ಪ್ರಕರಣದಲ್ಲೂ ಶಿಕ್ಷೆಯಾಗಿಲ್ಲ ಎಂದು ಅವರು ಬುಧವಾರ ಲೋಕಸಭೆಯಲ್ಲಿ ತಿಳಿಸಿದರು.

ಶಾಲೆಯ ಛಾವಣಿ ಏರಿ ಆತ್ಮಹತ್ಯೆಗೆ ಯತ್ನ, ವ್ಯಕ್ತಿಯ ರಕ್ಷಣೆ

ಬೆಂಗಳೂರು 22 ಜುಲೈ : ಇಲ್ಲಿನ ಶಾಲಾ ಕಟ್ಟಡವೊಂದರ ಛಾವಣಿ ಮೇಲೆ ನಿಂತು, ಒಡೆದ ಗಾಜಿನ ಚೂರನ್ನು ಹಿಡಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದರೆನ್ನಲಾದ 26 ವರ್ಷದ ವ್ಯಕ್ತಿಯೊಬ್ಬರನ್ನು ರಕ್ಷಿಸಲಾಗಿದೆ ಎಂದು ಪೊಲೀಸರು ಬುಧವಾರ ತಿಳಿಸಿದ್ದಾರೆ. ಈ ಘಟನೆಯು ಜುಲೈ 21 ರಂದು ನಡೆದಿದೆ ಎಂದು ಅವರು ಹೇಳಿದರು.

ಕೋಣನಕುಂಟೆ ಪೊಲೀಸ್ ಠಾಣಾ ವ್ಯಾಪ್ತಿಯ ಶಾಲಾ ಕಟ್ಟಡವೊಂದರ ಛಾವಣಿ ಮೇಲೆ ವ್ಯಕ್ತಿಯೊಬ್ಬರು ಆತ್ಮಹತ್ಯೆಗೆ ಯತ್ನಿಸುತ್ತಿರುವುದನ್ನು ಗಮನಿಸಿದ ಸಾರ್ವಜನಿಕರು ನಮಗೆ ವಿಷಯ ತಿಳಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ; ಕೌಟುಂಬಿಕ ಸಮಸ್ಯೆಗಳೇ ಈ ಪ್ರಯತ್ನಕ್ಕೆ ಕಾರಣವೆನ್ನಲಾಗಿದೆ.

ಪೊಲೀಸರ ಪ್ರಕಾರ, 'ನಮ್ಮ 112' ತಂಡವು ಈ ಮಾಹಿತಿಯನ್ನು ತಕ್ಷಣವೇ ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳಿಗೆ ರವಾನಿಸಿತು; ಇದರ ಬೆನ್ನಲ್ಲೇ ಅವರು 10 ನಿಮಿಷಗಳೊಳಗೆ ಸ್ಥಳಕ್ಕೆ ತಲುಪಿ, ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಸಿಬ್ಬಂದಿಯೊಂದಿಗೆ ನಿಕಟ ಸಮನ್ವಯ ಸಾಧಿಸಿ ರಕ್ಷಣಾ ಕಾರ್ಯಾಚರಣೆ ನಡೆಸಿದರು.

ಯಾವುದೇ ಗಾಯ ಅಥವಾ ಹಾನಿಯಾಗದಂತೆ ಆ ಯುವಕನನ್ನು ಕಟ್ಟಡದಿಂದ ಸುರಕ್ಷಿತವಾಗಿ ಕೆಳಗಿಳಿಸಲಾಯಿತು. ನಂತರ ಆತನನ್ನು ಪೊಲೀಸ್ ಠಾಣೆಗೆ ಕರೆದೊಯ್ಯಲಾಯಿತು ಮತ್ತು ಅಲ್ಲಿಗೆ ಅವನ ಪೋಷಕರನ್ನು ಕರೆಸಲಾಯಿತು ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.

ಪೊಲೀಸರು ಅವರಿಗೆ ಅಗತ್ಯವಾದ ಸಮಾಲೋಚನೆ, ಭಾವನಾತ್ಮಕ ಬೆಂಬಲ ಮತ್ತು ಭರವಸೆಯನ್ನು ಒದಗಿಸಿದ್ದಾರೆ. ಅವರ ದೈಹಿಕ ಕ್ಷೇಮ ಮತ್ತು ಸುರಕ್ಷತೆಯನ್ನು ಖಚಿತಪಡಿಸಿಕೊಂಡ ನಂತರ, ಅವರನ್ನು ಅವರ ಕುಟುಂಬಕ್ಕೆ ಒಪ್ಪಿಸಲಾಯಿತು ಎಂದು ಅವರು ಹೇಳಿದರು.

ಹಿಮಾಲಯ, ಈಶಾನ್ಯ ರಾಜ್ಯಗಳಲ್ಲಿ ಭಾರೀ ಮಳೆ : ಕನಿಷ್ಠ ೧೨೦ ಮಂದಿ ಮೃತ್ಯು

ಹೊಸದಿಲ್ಲಿ 22 ಜುಲೈ : ಹಿಮಾಲಯ ಮತ್ತು ಈಶಾನ್ಯ ರಾಜ್ಯಗಳಲ್ಲಿ ಕಳೆದ ಕೆಲವು ವಾರಗಳಿಂದ ಸತತವಾಗಿ ಮಳೆ ಸುರಿಯುತ್ತಿದ್ದು, ಮಳೆ ಸಂಬಂಧಿ ಘಟನೆಗಳಲ್ಲಿ ಸುಮಾರು 120 ಮಂದಿ ಪ್ರಾಣ ಕಳೆದುಕೊಂಡಿದ್ದಾರೆ.

ಅಸ್ಸಾಂ, ಹಿಮಾಚಲಪ್ರದೇಶ, ಅರುಣಾಚಲಪ್ರದೇಶ, ನಾಗಾಲ್ಯಾಂಡ್, ಜಮ್ಮು ಮತ್ತು ಕಾಶ್ಮೀರದಾದ್ಯಂತ ಸಾವಿರಾರು ಜನರು ನಿರಾಶ್ರಿತರಾಗಿದ್ದಾರೆ. ರಸ್ತೆ ಮತ್ತು ಸೇತುವೆಗಳು ಕೊಚ್ಚಿಕೊಂಡು ಹೋಗಿವೆ. ರೈಲು ಸೇವೆಗಳು ಅಸ್ತವ್ಯಸ್ತಗೊಂಡಿವೆ. ದುರಂತದಲ್ಲಿ ಸಿಲುಕಿಕೊಂಡ ಜನರನ್ನು ಸ್ಥಳಾಂತರಿಸಲು ರಕ್ಷಣಾ ಸಂಸ್ಥೆಗಳು ಸೆಮರೋಜಾದಿಯಲ್ಲಿ ಶ್ರಮಿಸುತ್ತಿವೆ.

ಜಮ್ಮು ಮತ್ತು ಕಾಶ್ಮೀರ ಅತ್ಯಂತ ತೀವ್ರ ಪೀಡಿತ ಪ್ರದೇಶಗಳಲ್ಲಿ ಒಂದಾಗಿದ್ದು, ಇಲ್ಲಿ ಕಳೆದ 48 ಗಂಟೆಗಳಲ್ಲಿ ಮಳೆ ಸಂಬಂಧಿತ ಘಟನೆಗಳಲ್ಲಿ 23 ಜನರು ಮೃತಪಟ್ಟಿದ್ದಾರೆ. ಇವರಲ್ಲಿ ಹೆಚ್ಚಿನವರು ಪೂಂಚ್ ಮತ್ತು ರಾಜೌರಿ ಜಿಲ್ಲೆಯವರಾಗಿದ್ದಾರೆ. ಶೋಧ ಕಾರ್ಯಾಚರಣೆ ಮುಂದುವರಿದಿದ್ದು, ಏಳು ಜನರು ಇನ್ನೂ ಪತ್ತೆಯಾಗಿಲ್ಲ.

ಭಾರತೀಯ ಹವಾಮಾನ ಇಲಾಖೆ ಮುಂದಿನ 48 ಗಂಟೆಗಳ ಹವಾಮಾನ ಮುನ್ಸೂಚನೆ ನೀಡಿದ್ದು, ಭಾರೀ ಮಳೆ, ಹಠಾತ್ ಪ್ರವಾಹ, ಭೂಕುಸಿತದ ಭೀತಿಯ ಬಗ್ಗೆ ಎಚ್ಚರಿಸಿದೆ.

ಹಿಮಾಚಲ ಪ್ರದೇಶದಲ್ಲಿ ಭಾರೀ ಮಳೆ ಸುರಿಯುತ್ತಿದ್ದು, ಜುಲೈ 8ರಿಗೆಗೊಂದರಲ್ಲೇ ಭೂಕುಸಿತ, ರಸ್ತೆ ಅಪಘಾತ, ಬಂಡೆ ಕುಸಿತದಿಂದ ಮೃತಪಟ್ಟವರು ಸೇರಿದಂತೆ ಮಳೆ ಸಂಬಂಧಿ ಘಟನೆಗಳಲ್ಲಿ 66 ಮಂದಿ ಮೃತಪಟ್ಟಿದ್ದಾರೆ.

ಅಸ್ಸಾಂನಲ್ಲಿ ಕಳೆದ 24 ಗಂಟೆಗಳಲ್ಲಿ ಮಳೆಯಿಂದಾಗಿ ಸ್ಥಳೀಯಾದ ಪ್ರವಾಹದಿಂದ 21 ಜನರು ಮೃತಪಟ್ಟಿದ್ದಾರೆ. ಇದರೊಂದಿಗೆ ಈ ವರ್ಷ ಪ್ರವಾಹದಲ್ಲಿ ಮೃತಪಟ್ಟವರ ಸಂಖ್ಯೆ 31ಕ್ಕೆ ಏರಿಕೆಯಾಗಿದೆ. ಅಸ್ಸಾಂ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಕಾರ, 16 ಜಿಲ್ಲೆಗಳಲ್ಲಿ 5.64 ಲಕ್ಷಕ್ಕೂ ಅಧಿಕ ಜನರು ಸಂತ್ರಸ್ತರಾಗಿದ್ದಾರೆ.

ನಾಗಾಲ್ಯಾಂಡ್ ಮೋನ್ ಜಿಲ್ಲೆಯಲ್ಲಿ ಹಠಾತ್ ಪ್ರವಾಹ ಮತ್ತು ಭೂಕುಸಿತದಿಂದ ಮೃತರ ಸಂಖ್ಯೆ ಹೆಚ್ಚಿತ್ತಿದೆ ,

ಜೈಲಿನಿಂದ ಪರಾರಿಯಾದ ಕೈದಿ ಬಗ್ಗೆ ಮಾಹಿತಿ ನೀಡಿದವರಿಗೆ ೧೫ ಸಾವಿರ ರೂ. ಬಹುಮಾನ ಘೋಷಣೆ

ಬೀದರ್ 22 ಜುಲೈ : ಇತ್ತೀಚೆಗೆ ಕಲ್ಬುರ್ಗಿ ಜೈಲಿನಿಂದ ಪರಾರಿಯಾದ ಕೈದಿ ಬಗ್ಗೆ ಮಾಹಿತಿ ನೀಡಿದವರಿಗೆ ಬೀದರ ಜಿಲ್ಲಾ ಪೊಲೀಸ್ ರಿಂದ 15 ಸಾವಿರ ರೂ. ಬಹುಮಾನ ಘೋಷಣೆ ಮಾಡಲಾಗಿದೆ. ಪೊಲೀಸ್ ಇಲಾಖೆ ಪ್ರಕಟಣೆ ತಿಳಿಸಿದೆ. ಬಸವಕಲ್ಯಾಣ ತಾಲೂಕಿನ ಇಸ್ಲಾಂಪುರ್ ಗ್ರಾಮದ ನಿವಾಸಿಯಾದ ಮಸ್ತಾನಪ್ಪ ಅಲಿಯಾಸ್ ಮಾಶಾ (28) ಪರಾರಿಯಾದ ಕೈದಿ.

ಜೈಲಿನಿಂದ ಪರಾರಿಯಾದ ಮಸ್ತಾನಪ್ಪ ಎಂಬ ಕೈದಿ ಬಗ್ಗೆ ಮಾಹಿತಿ ನೀಡಿದವರಿಗೆ ಬೀದರ್ ಜಿಲ್ಲಾ ಪೊಲೀಸರಿಂದ 15 ಸಾವಿರ ರೂ. ಘೋಷಣೆ ಮಾಡಲಾಗಿದೆ. ಮಾಹಿತಿ ನೀಡಿದವರ ವಿಳಾಸವನ್ನು ಗೌಪ್ಯವಾಗಿ ಇಡಲಾಗುವುದು ಎಂದು ಪೊಲೀಸ್ ಇಲಾಖೆಯಿಂದ ಭರವಸೆ ನೀಡಲಾಗಿದೆ. ಈತನ ಬಗ್ಗೆ ಮಾಹಿತಿ ಇದ್ದವರು 94808 03400, 94808 03438, 94808 03422 ಹಾಗೂ 94808 03460 ಈ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ತಿಳಿಸಬಹುದಾಗಿದೆ.

ಘಟನೆ ವಿವರ:

ಕಲಬುರಗಿ ಕೇಂದ್ರ ಕಾರಾಗೃಹದಿಂದ ಜು.14 ರ ನಸುಕಿನ ಜಾವದಲ್ಲಿ ಶಿಕ್ಷಾ ಕೈದಿಗಳಾದ ಸಾಗರ್, ಸಂತೋಷ್ ಹಾಗೂ ಮಸ್ತಾನ್ ಎನ್ನುವ ಮೂವರು ಕೈದಿಗಳು ಪರಾರಿಯಾಗಿದ್ದರು. ಈ ಕುರಿತು ಸಂತೋಷ್ ಎಂಬಾತನನ್ನು ಹುಮನಾಬಾದ್ ಸಮೀಪ ಬಂಧಿಸಿದರೆ, ಸಾಗರ್ ಎಂಬಾತನನ್ನು ಭಾಲ್ಕಿಯ ಬಸ್ ನಿಲ್ದಾಣದ ಹತ್ತಿರ ಬಂಧಿಸಲಾಗಿತ್ತು. ಮೂರನೆ ಕೈದಿಯಾದ ಮಸ್ತಾನ್ ನ ಪತ್ತೆಗೆ ಪೊಲೀಸರು ಜಾಲ ಬೀಸಿದ್ದು, ಈತನ ಬಗ್ಗೆ ಮಾಹಿತಿ ನೀಡಿದವರಿಗೆ ಬಹುಮಾನ ಘೋಷಣೆ ಮಾಡಲಾಗಿದೆ.

ಶಿಕ್ಷಣವೇ ಸಮಾಜದ ಪರಿವರ್ತನೆಯ ದಾರಿ: ರಮೇಶ ಮಂದಕನಳ್ಳಿ

ಕರ್ನಾಟಕ ದಲಿತ ಸಂಘರ್ಷ ಸಮಿತಿ (ಅಂಬೇಡ್ಕರ್‌ವಾದ) ವತಿಯಿಂದ ರಾಜ್ಯ ಪ್ರಧಾನ ಸಂಚಾಲಕ ಮಾವಳಿ ಶಂಕರ್ ಅವರ ಜನ್ಮದಿನದ ಅಂಗವಾಗಿ ಬೀದರ್‌ನ ಪ್ರಶಾಂತ್ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್‌ಗಳನ್ನು ವಿತರಿಸಲಾಯಿತು. ಈ ವೇಳೆ ಮಾತನಾಡಿದ ಜಿಲ್ಲಾ ಸಂಚಾಲಕ ರಮೇಶ ಮಂದಕನಳ್ಳಿ, ಶಿಕ್ಷಣವೇ ಸಮಾಜ ಪರಿವರ್ತನೆಯ ಅತ್ಯಂತ ಪರಿಣಾಮಕಾರಿ ಸಾಧನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಶಿಕ್ಷಣದ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು.

▶ ಉಳಿದ ಸುದ್ದಿ 2ನೇ ಪುಟದಲ್ಲಿ...

'ನಮ್ಮ ಟೈಂ ವೇಸ್ಟ್ ಮಾಡೋಡಿ': ದಿಲ್ಲಿ ವಿದ್ಯಾರ್ಥಿ ಪ್ರತಿಭಟನಾಕಾರರ ಅರ್ಜಿ ತುರ್ತು ವಿಚಾರಣೆಗೆ ಸುಪ್ರೀಂ ಕೋರ್ಟ್ ನಿರಾಕರಣೆ

ದೆಹಲಿ ವಿದ್ಯಾರ್ಥಿ ಪ್ರತಿಭಟನಾಕಾರರು ಸಲ್ಲಿಸಿದ್ದ ಅರ್ಜಿಯನ್ನು ತುರ್ತು ವಿಚಾರಣೆಗೆ ತೆಗೆದುಕೊಳ್ಳಲು ಸುಪ್ರೀಂ ಕೋರ್ಟ್ ನಿರಾಕರಿಸಿದೆ. ವಿಚಾರಣೆ ವೇಳೆ, "ನಮ್ಮ ಸಮಯ ವ್ಯರ್ಥ ಮಾಡಬೇಡಿ" ಎಂದು ನ್ಯಾಯಪೀಠ ಅರ್ಜಿದಾರರ ಪರ ವಕೀಲರಿಗೆ ಸೂಚಿಸಿ, ಅರ್ಜಿಯಲ್ಲಿ ತುರ್ತು ವಿಚಾರಣೆಗೆ ಅಗತ್ಯವಾದ ಅಸಾಧಾರಣ ಪರಿಸ್ಥಿತಿ ಕಂಡುಬಂದಿಲ್ಲ ಎಂದು ತಿಳಿಸಿತು. ಸಂಬಂಧಿತ ಹೈಕೋರ್ಟ್ ಅಥವಾ ಸಕ್ಷಮ ನ್ಯಾಯಾಲಯವನ್ನು ಸಂಪರ್ಕಿಸುವಂತೆ ಸಲಹೆ ನೀಡಿದ ನ್ಯಾಯಪೀಠ, ಪ್ರತಿಯೊಂದು ಅರ್ಜಿಯನ್ನು ತುರ್ತಾಗಿ ವಿಚಾರಣೆ ನಡೆಸಲು ಸಾಧ್ಯವಿಲ್ಲ ಎಂದು ಸ್ಪಷ್ಟಪಡಿಸಿತು.

▶ ಉಳಿದ ಸುದ್ದಿ 3ನೇ ಪುಟದಲ್ಲಿ...

ಬಡವರ್ಗದ ಬ್ರಾಹ್ಮಣರಿಗೆ 'ವಿಪ್ರ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ

ಬೆಂಗಳೂರು 22 ಜುಲೈ : ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ 2026-27ನೇ ಸಾಲಿನ 'ವಿಪ್ರ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ'ಗೆ ಅರ್ಜಿ ಆಹ್ವಾನಿಸಿದೆ ಮಾಹಿತಿ ಪುಸ್ತಕವನ್ನು ಉಪ ಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ಅವರು ವಿಧಾನಸೌಧದಲ್ಲಿ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ರಾಜ್ಯದ ಬ್ರಾಹ್ಮಣ ಸಮುದಾಯದ ಆರ್ಥಿಕವಾಗಿ ಹಿಂದುಳಿದ ವರ್ಗದ ಸಬಾಂಗೀಣ ಅಭಿವೃದ್ಧಿಗಾಗಿ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಸ್ವಯಂ ಉದ್ಯೋಗ ಸೇರಿದಂತೆ ವಿವಿಧ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು. ಆರ್ಥಿಕವಾಗಿ ಹಿಂದುಳಿದ ಬ್ರಾಹ್ಮಣ ಸಮುದಾಯದವರಿಗೆ ಗುಡಿ ಕೈಗಾರಿಕೆ, ಸಣ್ಣ ಕೈಗಾರಿಕೆ, ಹೋಟೆಲ್ ಉದ್ಯಮ ಹಾಗೂ ಪಶುಸಂಗೋಪನೆ ಮುಂತಾದ ಸ್ವಯಂ ಉದ್ಯೋಗಗಳನ್ನು ಆರಂಭಿಸಲು ಆರ್ಥಿಕ ನೆರವು ನೀಡುವ ಉದ್ದೇಶದಿಂದ 2025ರಿಂದ26ನೇ ಸಾಲಿನಲ್ಲಿ ವಿಪ್ರ ಸ್ವಯಂ ಉದ್ಯೋಗ ನೇರ ಸಾಲ ಯೋಜನೆಯನ್ನು ನಮ್ಮ ಸರ್ಕಾರ ಆರಂಭಿಸಿ ಎಂದು ಹೇಳಿದರು. ಈ ಯೋಜನೆಯಡಿ ಕನಿಷ್ಠ 1 ಲಕ್ಷ ರೂಪಾಯಿಗಳಿಂದ ಗರಿಷ್ಠ 2 ಲಕ್ಷ ರೂಪಾಯಿಗಳವರೆಗೆ ಸಾಲ ನೀಡಲಾಗುತ್ತದೆ. ಸಾಲದ ಮೊತ್ತದಲ್ಲಿ 20 ಶೇಕಡಾ ಸಬ್ಸಿಡಿ ನಿಡಲಾಗುತ್ತಿದ್ದು, ಉಳಿದ 80 ಶೇಕಡಾ ಮೊತ್ತವನ್ನು ವಾರ್ಷಿಕ 4 ಶೇಕಡಾ ಬಡ್ಡಿದರದಲ್ಲಿ ಒಟ್ಟು 34 ಕಂತುಗಳಲ್ಲಿ ಮರುಪಾವತಿಸಬೇಕಾಗುತ್ತದೆ ಎಂದು ಅವರು ತಿಳಿಸಿದರು.

೪೪.೪೮ ಲಕ್ಷ ಮತದಾರರನ್ನು 'ಎಎಸ್‌ಡಿಡಿಒ' ಎಂದು ಗುರುತಿಸಲಾಗಿದೆ : ಮುಖ್ಯ ಚುನಾವಣಾಧಿಕಾರಿ

ಬೆಂಗಳೂರು 22 ಜುಲೈ : ರಾಜ್ಯದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯು ಸೂ.30ರಿಂದ ಆರಂಭವಾಗಿದ್ದು, ಮತದಾರರ ಮನೆ ಬಾಗಿಲಿಗೆ ಗಣತಿ ನಮೂನೆ (ಎನ್ಯುಮರೇಷನ್ ಫಾರಂ) ಗಳನ್ನು ಬೂತ್ ಮಟ್ಟದ ಅಧಿಕಾರಿ(ಬಿಎಲ್‌ಒ) ಗಳು ತಲುಪಿಸುತ್ತಿದ್ದು, 44,84,331 ಮತದಾರರನ್ನು 'ಎಎಸ್‌ಡಿಡಿಒ' (ABSENT, SHIFTING, DEAD, DUPLICATE, OTHER) ಎಂದು ಗುರುತಿಸಲಾಗಿದೆ ಎಂದು ರಾಜ್ಯ ಮುಖ್ಯ ಚುನಾವಣಾಧಿಕಾರಿ ವಿ.ಅನ್ಬುಕುಮಾರ್ ತಿಳಿಸಿದರು.

ಉಚಿತರಂಡಿಚಿಹ್ನುಳಿ ಖಿಜಜಿಜಿಡಿಚಿಟಿಖಿ ಬುಧವಾರ ನಗರದ ಶೇಷಾದ್ರಿ ರಸ್ತೆಯಲ್ಲಿರುವ ಮುಖ್ಯ ಚುನಾವಣಾಧಿಕಾರಿ ಕಚೇರಿಯಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜು.22ರ ಮಧ್ಯಾಹ್ನ 2 ಗಂಟೆವರೆಗೆ ಎಎಸ್‌ಡಿಡಿಒ ಎಂದು ಗುರುತಿಸಲಾಗಿರುವ 44,84,331 ಮತದಾರರ ಪೈಕಿ 5,87,457 ಮಂದಿ ಗಣತಿ ನಮೂನೆ ತಲುಪಿಸಲು ಲಭ್ಯವಾಗಿಲ್ಲ, 26,32,229 ಮತದಾರರು ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ, 9,81,642 ಮಂದಿ ಮೃತಪಟ್ಟಿದ್ದಾರೆ, 2,70,659 ಮಂದಿ ಈಗಾಗಲೆ ಬೇರೆ ಕಡೆ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರುಗಳನ್ನು ಸೇರ್ಪಡೆ ಮಾಡಿಕೊಂಡಿದ್ದಾರೆ

ಎನ್ಯುಮರೇಷನ್ ಫಾರ